# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: | 1069 |
| ಸದಸ್ಯರ ಹೆಸರು | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | ಲೋಕೋಪಯೋಗಿ ಸಚಿವರು |
| ಉತ್ತರಿಸುವ ದಿನಾಂಕ | 28.12.2022 |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ತ್ರಿಪುರ ರಾಜ್ಯದಲ್ಲಿ ಕೈಗೊಂಡಿರುವ ಮಾದರಿಯಲ್ಲಿ ರಾಜ್ಯದಲ್ಲಿ ರಸ್ತೆ ನಿರ್ಮಾಣದಲ್ಲಿ ಪ್ಲಾಸ್ಟಿಕ್ ತ್ಯಾಜ್ಯವನ್ನು ಬಳಸಲು ಸರ್ಕಾರ ಮುಂದಾಗಿದೆಯೇ; | ರಾಜ್ಯದಲ್ಲಿ ರಸ್ತೆ ನಿರ್ಮಾಣದಲ್ಲಿ ಪ್ಲಾಸ್ಟಿಕ್ ತ್ಯಾಜ್ಯವನ್ನು ಬಳಸಲು ಅನುವಾಗುವಂತೆ ಇತ್ತೀಚೆಗೆ 2021–22ನೇ ಸಾಲಿನಲ್ಲಿ ಬಿಡುಗಡೆಗೊಳಿಸಲಾಗಿರುವ ಏಕರೂಪ ದರಪಟ್ಟಿಯಲ್ಲಿ ಸಂಪುಟ–3ರ ಕ್ರ.ಸಂ.5.29 (ಎ) ಮತ್ತು (ಬಿ) ರಲ್ಲಿ ಪ್ಲಾಸ್ಟಿಕ್ ತ್ಯಾಜ್ಯವನ್ನು ಬಳಸಿ ರಸ್ತೆಯ ಮೇಲ್ಮೈ ಪದರವಾದ ಬಿಟುಮಿನಸ್ ಕಾಂಕ್ರೀಟ್‌ಗೆ ಸಂಬಂಧಿಸಿದಂತೆ ವಿಶಿಷ್ಟ ವಿವರಣೆ ಹಾಗೂ ಅವುಗಳ ದರಗಳನ್ನು ಈಗಾಗಲೇ ಸೇರ್ಪಡೆ ಮಾಡಲಾಗಿರುತ್ತದೆ. |
| ಆ) | ಹಾಗಿದ್ದಲ್ಲಿ, ತ್ಯಾಜ್ಯ ಬಳಕೆಯಿಂದ ಪ್ರತಿ ಕಿ.ಮೀ. ರಸ್ತೆ ನಿರ್ಮಾಣದಲ್ಲಿ ತಗ್ಗುವ ವೆಚ್ಚವೆಷ್ಟು; (ಪೂರ್ಣ ಮಾಹಿತಿ ನೀಡುವುದು) | ಪ್ಲಾಸ್ಟಿಕ್ ತ್ಯಾಜ್ಯವನ್ನು ಬಳಸಿ ರಸ್ತೆ ನಿರ್ಮಾಣವನ್ನು ಮಾಡಿದ್ದಲ್ಲಿ ಡಾಂಬರು ಪದರದಲ್ಲಾಗುವ ವೆಚ್ಚದಲ್ಲಿ ಶೇ.12 ರಷ್ಟು ಉಳಿತಾಯವನ್ನು ಮಾಡಬಹುದಾಗಿರುತ್ತದೆ. |
| ಇ) | ರಾಜ್ಯದಲ್ಲಿ ಇಂತಹ ತಂತ್ರಜ್ಞಾನವನ್ನು ಅಳವಡಿಸುವ ಮುನ್ನ ತಜ್ಞರಿಂದ ಅಧ್ಯಯನ ಮಾಡಲಾಗಿದೆಯೇ? (ಹಾಗಿದ್ದಲ್ಲಿ ಪೂರ್ಣ ವಿವರ ನೀಡುವುದು) | ಬಹಳಷ್ಟು ಅಧ್ಯಯನವನ್ನು ಮಾಡಲಾಗಿದ್ದು, ಲೋಕೋಪಯೋಗಿ ಇಲಾಖೆಯಲ್ಲಿ ಏಕರೂಪ ದರಪಟ್ಟಿ ತಯಾರಿಕೆ ತಂಡದ(Technical Working group) ತಜ್ಞರ ಶಿಫಾರಸ್ಸಿನನ್ವಯ ಹೊಸ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲಾಗುತ್ತಿದೆ. |

ಲೋಇ 155 ಸಿಕ್ಯೂಎನ್ 2022(ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು